## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಗ್ರಾಮ ಪಂಚಾಯತಿಗಳ ವಿದ್ಯುತ್ ಬಿಲ್ ಬಾಕಿ ಇಲ್ಲದಿದ್ದಲ್ಲಿ, ಎಸ್ಕ್ರೋ ಖಾತೆಯಲ್ಲಿ ಉಳಿದಿರುವ ಅನುದಾನವನ್ನು ಅಭಿವೃದ್ಧಿ ಕಾರ್ಯಗಳಿಗೆ ಬಳಸಿಕೊಳ್ಳಲು ಗ್ರಾಮ ಪಂಚಾಯತಿ ನಿಧಿ ಖಾತೆಗೆ ವರ್ಗಾವಣೆ ಮಾಡುವ ಬಗ್ಗೆ.

**ಓದಲಾಗಿದೆ:** 1) ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 10 ಗ್ರಾಪಸ 2015, ದಿನಾಂಕ 10.03.2015

2) ಸರ್ಕಾರದ ಪತ್ರ ಸಂಖ್ಯೆ: ಗ್ರಾಅಪ 343 ಗ್ರಾಪಂಅ 2016, ದಿನಾಂಕ 20.05.2016

***

**ಪ್ರಸ್ತಾವನೆ:**

ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳು ಬೀದಿ ದೀಪ ಹಾಗೂ ಕುಡಿಯುವ ನೀರು ಸ್ಥಾವರಗಳ ವಿದ್ಯುತ್ ಬಿಲ್ಲುಗಳನ್ನು ಎಸ್ಕಾಂಗಳಿಗೆ ಸಕಾಲಕ್ಕೆ ಪಾವತಿಸದೆ ಬಾಕಿ ಉಳಿಸಿಕೊಳ್ಳುತ್ತಿದ್ದು, ಇದರಿಂದ ಎಸ್ಕಾಂ ನವರು ವಿದ್ಯುತ್ ಬಿಲ್ ಬಾಕಿ ಬಗ್ಗೆ ಸರ್ಕಾರದ ಮಟ್ಟದಲ್ಲಿ ಕೋರಿಕೆ ಸಲ್ಲಿಸಿದ ಹಿನ್ನೆಲೆಯಲ್ಲಿ, ರಾಜ್ಯ ಸರ್ಕಾರದ ವತಿಯಿಂದ ಗ್ರಾಮ ಪಂಚಾಯತಿಗಳಿಗೆ ಬಿಡುಗಡೆಯಾಗುತ್ತಿರುವ ಶಾಸನಬದ್ಧ ಅನುದಾನದಲ್ಲಿ ಶೇ.60 ರಷ್ಟು ಅನುದಾನ ಹಾಗೂ ಕೇಂದ್ರ ಸರ್ಕಾರದಿಂದ ಬಿಡುಗಡೆಯಾಗುವ ಹಣಕಾಸು ಆಯೋಗದ ಸಾಮಾನ್ಯ ಮೂಲ ಅನುದಾನ ಹಾಗೂ ಸಾಮಾನ್ಯ ನಿರ್ವಹಣಾ ಅನುದಾನದಿಂದ ಶೇ.25% ರಷ್ಟು ಮೊತ್ತವನ್ನು ಈ ಉದ್ದೇಶಕ್ಕಾಗಿ ಮೇಲೆ ಓದಲಾದ (1) ರನ್ವಯ ಗ್ರಾಮ ಪಂಚಾಯತಿಗಳಲ್ಲಿ ತೆರೆದಿರುವ ಎಸ್ಕ್ರೋ ಖಾತೆಗೆ ಜಮಾ ಮಾಡಿ, ಈ ಖಾತೆಯ ಮೂಲಕ ವಿದ್ಯುತ್ ಬಿಲ್‌ಗಳನ್ನು ಎಸ್ಕಾಂಗಳಿಗೆ ನೇರವಾಗಿ ಪಾವತಿಸುವ ವ್ಯವಸ್ಥೆಯನ್ನು ಜಾರಿಗೆ ತರಲಾಗಿದೆ.

ಕೆಲವು ಗ್ರಾಮ ಪಂಚಾಯತಿಗಳು ತಮ್ಮ ಹಂತದಲ್ಲಿಯೇ ವಿದ್ಯುತ್ ಶುಲ್ಕ ಪಾವತಿಸುತ್ತಿದ್ದು, ಅಂತಹ ಗ್ರಾಮ ಪಂಚಾಯತಿಗಳು ಬೀದಿ ದೀಪ ಹಾಗೂ ಕುಡಿಯುವ ನೀರು ಸ್ಥಾವರಗಳ ವಿದ್ಯುತ್ ಶುಲ್ಕಗಳನ್ನು ಸಂಪೂರ್ಣವಾಗಿ ಪಾವತಿಸಿದ ಬಗ್ಗೆ ಧೃಢೀಕರಣದೊಂದಿಗೆ, ಎಸ್ಕ್ರೋ ಖಾತೆಯಲ್ಲಿ ಉಳಿದಿರುವ ಅನುದಾನವನ್ನು ಅಭಿವೃದ್ಧಿ ಕಾರ್ಯಗಳಿಗೆ ಬಳಸಿಕೊಳ್ಳಲು ಗ್ರಾಮ ಪಂಚಾಯತಿ ನಿಧಿ ಖಾತೆಗೆ ವರ್ಗಾವಣೆ ಮಾಡಲು ಕೋರಿ ಜಿಲ್ಲಾ ಪಂಚಾಯತಿಗಳಿಂದ ಬರುವ ಪ್ರಸ್ತಾವನೆಗಳಿಗೆ ಎಸ್ಕ್ರೋ ಖಾತೆಯ ಹಣವನ್ನು ಅಭಿವೃದ್ಧಿ ಕಾರ್ಯಗಳಿಗೆ ಬಳಸಿಕೊಳ್ಳುವ ಉದ್ದೇಶಕ್ಕಾಗಿ ಗ್ರಾಮ ಪಂಚಾಯತಿಗಳಿಗೆ ಬಿಡುಗಡೆ ಮಾಡಲು ಸರ್ಕಾರದ ವತಿಯಿಂದ ಮೇಲೆ ಓದಲಾದ (2) ರನ್ವಯ ಅನುಮತಿ ನೀಡಲಾಗುತ್ತಿದೆ.

ಎಸ್ಕ್ರೋ ಖಾತೆಯನ್ನು ಜಿ–ಸೇವಾ ಬ್ಯಾಂಕಿನ ಮೂಲಕ ತೆರೆದಿದ್ದು, ವಿದ್ಯುತ್ ಶುಲ್ಕ ಅಲ್ಲದೆ ಬೇರೆ ಉದ್ದೇಶಕ್ಕೆ ಬಳಕೆ ಮಾಡಲು ಅವಕಾಶವಿರದಂತೆ ಸದರಿ ಖಾತೆಯ ಧನಾದೇಶ ಮತ್ತು ಪಾಸ್‌ಪುಸ್ತಕಗಳ ಮೇಲೆ ಪಾವತಿದಾರರ ಹೆಸರಿನ ಮುಂದೆ ಸ್ಥಳೀಯ ಎಸ್ಕಾಂ ಕಛೇರಿ ಮೊಹರನ್ನು ನಮೂದಿಸುವ ಮೂಲಕ ನಿರ್ಬಂಧಿಸಿದೆ. ಎಸ್ಕಾಂಗಳಿಗೆ ಹೊರತುಪಡಿಸಿ ಉಳಿದ ಬಾಬ್ತುಗಳಿಗೆ ವೆಚ್ಚ ಮಾಡಲು ಸರ್ಕಾರದ ಅನುಮತಿ ಅವಶ್ಯಕವಿರುತ್ತದೆ. ಗ್ರಾಮ ಪಂಚಾಯತಿಗಳು ಎಸ್ಕಾಂಗಳಿಗೆ ಪಾವತಿಸಬೇಕಾಗಿರುವ ವಿದ್ಯುತ್ ಬಿಲ್‌ಗಳನ್ನು ಗ್ರಾಮ ಪಂಚಾಯತಿಗಳು ಸಂಪೂರ್ಣವಾಗಿ ಪಾವತಿಸಿರುವ ಬಗ್ಗೆ ಎಸ್ಕಾಂಗಳಿಂದ ಖಚಿತಪಡಿಸಿಕೊಂಡು, ಮುಂದಿನ ಮೂರು ತಿಂಗಳುಗಳ ಅಂದಾಜು ವಿದ್ಯುತ್ ಬಿಲ್ ಮೊತ್ತವನ್ನು ಎಸ್ಕ್ರೋ ಖಾತೆಯಲ್ಲಿ ಉಳಿಸಿಕೊಂಡು ಹಾಗೂ ಕ್ರಿಯಾಯೋಜನೆ ತಯಾರಿಸಿ, ನಿಯಮಾನುಸಾರ ಅನುಮೋದನೆ ಪಡೆದು ಸದರಿ ಅನುದಾನವನ್ನು ಖರ್ಚು ಮಾಡುವ ಷರತ್ತಿಗೊಳಪಟ್ಟು, ಎಸ್ಕ್ರೋ ಖಾತೆಯಲ್ಲಿ ಉಳಿದಿರುವ ಅನುದಾನವನ್ನು ಅಭಿವೃದ್ಧಿ ಕಾರ್ಯಗಳಿಗೆ ಬಳಸಿಕೊಳ್ಳಲು ಗ್ರಾಮ ಪಂಚಾಯತಿ ನಿಧಿ ಖಾತೆಗೆ ವರ್ಗಾವಣೆ ಮಾಡಲು ಅನುಮತಿ ನೀಡಲಾಗುತ್ತಿದೆ.

ಜಿಲ್ಲಾ ಪಂಚಾಯತಿಗಳಿಂದ ಹೆಚ್ಚಿನ ಪ್ರಸ್ತಾವನೆಗಳು ಸ್ವೀಕೃತವಾಗುತ್ತಿರುವ ಹಿನ್ನೆಲೆಯಲ್ಲಿ, ಗ್ರಾಮ ಪಂಚಾಯತಿಗಳ ವಿದ್ಯುತ್ ಬಿಲ್ ಬಾಕಿ ಇಲ್ಲದಿದ್ದಲ್ಲಿ, ಎಸ್ಕ್ರೋ ಖಾತೆಯಲ್ಲಿ ಉಳಿದಿರುವ ಅನುದಾನವನ್ನು ಅಭಿವೃದ್ಧಿ ಕಾರ್ಯಗಳಿಗೆ ಬಳಸಿಕೊಳ್ಳಲು ಗ್ರಾಮ ಪಂಚಾಯತಿ ನಿಧಿ ಖಾತೆಗೆ ವರ್ಗಾವಣೆ ಮಾಡುವಲ್ಲಿ ಆಗುತ್ತಿರುವ ವಿಳಂಬವನ್ನು ತಪ್ಪಿಸುವ ಉದ್ದೇಶದಿಂದ ಮೇಲೆ ವಿವರಿಸಿದಂತೆ ಎಸ್ಕ್ರೋ ಖಾತೆಯಲ್ಲಿ ಉಳಿದಿರುವ ಅನುದಾನವನ್ನು ಅಭಿವೃದ್ಧಿ ಕಾರ್ಯಗಳಿಗೆ ಬಳಸಿಕೊಳ್ಳಲು ಗ್ರಾಮ ಪಂಚಾಯತಿ ನಿಧಿ ಖಾತೆಗೆ ವರ್ಗಾವಣೆ ಮಾಡಲು ಅನುಮತಿ ನೀಡುವ ಅಧಿಕಾರವನ್ನು ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಪ್ರತ್ಯಾಯೋಜಿಸಲು ಸರ್ಕಾರವು ನಿರ್ಧರಿಸಿದೆ. ಅದರಂತೆ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 356 ಗ್ರಾಪಂಅ 2017, ಬೆಂಗಳೂರು, ದಿನಾಂಕ 03.04.2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಗ್ರಾಮ ಪಂಚಾಯತಿಗಳ ವಿದ್ಯುತ್ ಬಿಲ್ ಬಾಕಿ ಇಲ್ಲದಿದ್ದಲ್ಲಿ, ಎಸ್ಕ್ರೋ ಖಾತೆಯಲ್ಲಿ ಉಳಿದಿರುವ ಅನುದಾನವನ್ನು ಅಭಿವೃದ್ಧಿ ಕಾರ್ಯಗಳಿಗೆ ಬಳಸಿಕೊಳ್ಳಲು ಗ್ರಾಮ ಪಂಚಾಯತಿ ನಿಧಿ ಖಾತೆಗೆ ವರ್ಗಾವಣೆ ಮಾಡಲು ಅನುಮತಿ ನೀಡುವ ಅಧಿಕಾರವನ್ನು ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಪ್ರತ್ಯಾಯೋಜಿಸಿ ಆದೇಶಿಸಿದೆ.

ಪ್ರಸ್ತಾವನೆಯಲ್ಲಿ ವಿವರಿಸಲಾದ ಷರತ್ತುಗಳನ್ನು ಪೂರೈಸಿರುವ ಬಗ್ಗೆ ಖಚಿತಪಡಿಸಿಕೊಂಡು ಅನುಮತಿ ನೀಡಲು ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

3/4/2017

(ಎಂ.ಕೆ.ಕೆಂಪೇಗೌಡ)
ನಿರ್ದೇಶಕರು(ಪಂ.ರಾಜ್-I) ಹಾಗೂ
ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಇವರಿಗೆ:**

1) ಮಹಾಲೇಖಪಾಲರು, ಬೆಂಗಳೂರು.
2) ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
3) ಪ್ರಧಾನ ವ್ಯವಸ್ಥಾಪಕರು, ಜಿ-ಸೇವಾ ಶಾಖೆ, ಸ್ಟೇಟ್ ಬ್ಯಾಂಕ್ ಆಫ್ ಮೈಸೂರು, ಬೆಂಗಳೂರು – ಇವರಿಗೆ ಸಲ್ಲಿಸುತ್ತಾ ಎಸ್ಕ್ರೋ ಖಾತೆ ಹೊಂದಿರುವ ಎಲ್ಲಾ ಶಾಖೆಗಳ ವ್ಯವಸ್ಥಾಪಕರಿಗೆ ಈ ಬಗ್ಗೆ ಮಾಹಿತಿ ನೀಡಿ, ಆಯಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಂದ ಈ ಬಗ್ಗೆ ಅನುಮತಿ ಪತ್ರ ಹಾಗೂ ಧೃಢೀಕರಣ ಪಡೆದ ನಂತರವೇ ಅನುದಾನ ವರ್ಗಾವಣೆ ಮಾಡುವಂತೆ ತಿಳಿಸಲು ಕೋರಿದೆ.
4) ವ್ಯವಸ್ಥಾಪಕ ನಿರ್ದೇಶಕರು, ಬೆಸ್ಕಾಂ, ಕೆ.ಆರ್.ವೃತ್ತ, ಬೆಂಗಳೂರು.
5) ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು.
6) ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳ ಅಧ್ಯಕ್ಷರು/ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.
(ಆಯಾ ತಾಲ್ಲೂಕು ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿಗಳ ಮುಖಾಂತರ)
7) ಸಂಪಾದಕರು, ಕರ್ನಾಟಕ ವಿಕಾಸ, ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ.
8) ಗಣಕಕೋಶ – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
9) ಹೆಚ್ಚುವರಿ ಪ್ರತಿ/ಶಾಖಾ ರಕ್ಷಕ ಕಡತ.

**ಪ್ರತಿ:**

1) ಮಾನ್ಯ ಗ್ರಾ.ಅ. ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ.
2) ಪ್ರಧಾನ ಪ್ರಧಾನ ಕಾರ್ಯದರ್ಶಿಗಳು(ಪಂ.ರಾಜ್), ಗ್ರಾ.ಅ. & ಪಂ.ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3) ಪ್ರಧಾನ ಕಾರ್ಯದರ್ಶಿಗಳು, ಇಂಧನ ಇಲಾಖೆ ರವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
4) ನಿರ್ದೇಶಕರು(ಪಂ.ರಾಜ್-I), ಗ್ರಾ.ಅ. & ಪಂ.ರಾಜ್ ಇಲಾಖೆ ರವರ ಆಪ್ತ ಸಹಾಯಕರು.